# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/15/2020-21 ದಿನಾಂಕ: 15/05/2021.**

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 15/05/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ Deter Committe ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀ ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು
3. ಶ್ರೀಮತಿ ಡಾ ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ
4. ಶ್ರೀ ಮಹೇಶ್ ಕುಮಾರ್ ಎಲ್, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ಸತ್ಯನಾರಾಯಣ, ಕಂದಾಯ ವಸೂಲಿಗಾರರು
6. ಶ್ರೀ ಸುರೇಶ್ ಈ.ಎಸ್, ಬಿಬಿಎಂಪಿ ಮಾರ್ಷಲ್
7. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-**

- ವಾರ್ಡ್ ವ್ಯಾಪ್ತಿಯಲ್ಲಿ ಸಹ ಪ್ರತಿದಿನ ಪಾಸಿಟಿವ್ ಕೇಸೇಸ್ ಹೆಚ್ಚು ಬರುತ್ತಿದ್ದು, ಸಾರ್ವಜನಿಕರು ಹೆಚ್ಚಿನ ಗಮನ ಹರಿಸಬೇಕು, ಕಡ್ಡಾಯವಾಗಿ ಮಾಸ್ಕ್‌ಧರಿಸಬೇಕು, ಆಗಾಗ ಕೈತೊಳೆಯಬೇಕು ಹಾಗೂ 6 ಅಡಿ ಅಂತರ ಕಾಪಾಡುವುದು ಅವಶ್ಯಕವಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

- ದೊಡ್ಡಬೊಮ್ಮಸಂದ್ರ ಸರ್ಕಾರಿ ಶಾಲೆಯಲ್ಲಿ, ರಾಮಚಂದ್ರ ಸರ್ಕಾರಿ ಶಾಲೆಯಲ್ಲಿ ಹಾಗೂ ತಿಂಡ್ಲು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವ್ಯಾಕ್ಸಿನ್ ಕೇಂದ್ರ ಸ್ಥಾಪಿಸಲಾಗಿದ್ದು, ಸರ್ಕಾರದ ನಿರ್ದೇಶನದಂತೆ 45 ವರ್ಷಕ್ಕಿಂತ ಮೇಲ್ಪಟ್ಟ ಎಲ್ಲಾ ಬಡಾವಣೆಯ ನಿವಾಸಿಗಳು / ಸಾರ್ವಜನಿಕರು ವ್ಯಾಕ್ಸಿನ್ ಹಾಕಿಸಿಕೊಳ್ಳಬೇಕಾಗಿ ಕೋರಿದರು.

**ಗೋಪಾಲ್‌ಕೃಷ್ಣ, ಸದಸ್ಯರು ಸುರೇಶ್, ಹಾಗೂ ಸಾರ್ವಜನಿಕರು:–** ವಾಡ್ ನಂ 10 ರ ವ್ಯಾಪ್ತಿಯಲ್ಲಿ ಕೋವಿಡ್–19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂದ ತೆಗೆದುಕೊಳ್ಳಬೇಕಾದ ಮಂಜಾಗ್ರತ ಕ್ರಮಗಳ ಬಗ್ಗೆ ಹಾಗೂ ವ್ಯಾಕ್ಸಿನ್ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಕೋರಿದರು.

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿಯವರು:**

- ವಾರ್ಡ್ ನಂ 10 ರಲ್ಲಿ Ward Decentralised Triage ಗಾಗಿ ಸೆಂಟರ್ ತೆರೆಯಲು, ವಾರ್ಡ್ 10 ರ ವ್ಯಾಪ್ತಿಯು ಕಡಿಮೆಯಿರುವುದರಿಂದ ಹಾಗೂ ಸ್ಥಳದ ಅಭಾವವಿರುವುದರಿಂದ Indoor stadium, ward no 09 ರಲ್ಲಿ Triage ಸೆಂಟರ್ ಸ್ಥಾಪಿಸಲು ಸ್ಥಳವನ್ನು ನಿಗದಿಪಡಿಸಿ ಮೇಲಾಧೀಕಾರಿಗಳಿಗೆ ತಿಳಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

- ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಸೂಚನೆಯಂತೆ Ward Decentralised Triage and Emergency Response(DETER) Committee for Covid-19 Management(WDC) ಸಮಿತಿಯನ್ನು ಸಭೆಯಲ್ಲಿ ಚರ್ಚಿಸಿ ಸ್ಥಾಪಿಸಲಾಗಿರುತ್ತದೆ ಹಾಗೂ W_10_WDC_Core, W_10_WDC_Triage (W9 & 10 Combined) ಮತ್ತು W_10_WDC_Volunteers group ಗಳನ್ನು ಮಾಡಿ ಸದಸ್ಯರುಗಳನ್ನು group ಗೆ ಸೇರ್ಪಡೆ ಮಾಡಲಾಗಿರುತ್ತದೆ.

- ಸಾರ್ವಜನಿಕರು ವ್ಯಾಕ್ಸಿನ್ ಪಡೆಯಲು ಜಾಗ್ರತಿ ಮೂಡಿಸಲು ಆಟೋ ಮುಖಾಂತರ ಪ್ರಚಾರ ಮಾಡಲು ಕ್ರಮವಹಿಸಲಾಗಿದೆ ಎಂದು ಸಭೆಗೆ ವಾರ್ಡ್ ಅಭಿಯಂತರರು ತಿಳಿಸಿದರು.

ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

Sunitha NK

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ನಂ10, ದೊಡ್ಡಬೊಮ್ಮಸಂದ್ರ

15/5/21

ನೋಡೆಲ್ ಅಧಿಕಾರಿ ವಾರ್ಡ್–10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೆರೆಗಳು) ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.